# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST ಇದು ಸುದ್ದಿ ವಿಳಾಸ ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 161 | Pages. 2 | Date: 03-06-2026, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 161 - ಪುಟಗಳು : 2 | 03-06-2026 | ಬುಧವಾರ | Ph: 8762954248 | ದರ : ₹1


## ಮುಂಗಾರು ಹಂಗಾಮಿಗೆ ಸಿದ್ಧತೆ ಕುರಿತು ಜಿಲ್ಲಾಧಿಕಾರಿ ಸಭೆ

# ರಾಸಾಯನಿಕ ಗೊಬ್ಬರಕ್ಕೆ ಕಡಿವಾಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ರೈತರು ರಾಸಾಯನಿಕ ರಸಗೊಬ್ಬರಗಳ ಬಳಕೆ ಕಡಿಮೆ ಮಾಡುವುದರ ಮೂಲಕ ಕೃಷಿ ಚಟುವಟಿಕೆಗಳ ವೆಚ್ಚಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಪ್ರತಿ ರೈತ ಸಂಪರ್ಕ ಕೇಂದ್ರಗಳಲ್ಲಿ ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು 2026-27 ನೇ ಸಾಲಿನ ಮುಂಗಾರು ಹಂಗಾಮಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ವಿತರಣೆ ಕುರಿತು ಸಭೆ ನಡೆಸಿ ಮಾತನಾಡಿದ ಅವರು ರಸಗೊಬ್ಬರಗಳಿಗೆ ಪರ್ಯಾಯವಾಗಿ




## ಸಾವಯವ ಕೃಷಿಯತ್ತ ಹೆಜ್ಜೆ

ಸಾವಯವ ಗೊಬ್ಬರವನ್ನು ಯಾವುದನ್ನು ಎಷ್ಟು ಪ್ರಮಾಣದಲ್ಲಿ ಬಳಸಬೇಕು ಎಂಬುದರ ಬಗ್ಗೆ ರೈತರಿಗೆ ಮಾಹಿತಿ ನೀಡಿ ಉತ್ತೇಜನ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಭೂಮಿ ಹಾಳಾಗುವುದನ್ನು ತಪ್ಪಿಸಲು ಹಾಗೂ ಮಣ್ಣಿನ ಫಲವತ್ತತೆ ಹೆಚ್ಚಿಸಿ ಗುಣಮಟ್ಟವನ್ನು ಸುಧಾರಿಸಲು ಕಾರ್ಯೋನ್ಮುಖರಾಗಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ನಿಗಾವಹಿಸಿ ರೈತರಿಗೆ ಸ್ಪಷ್ಟ ಮಾಹಿತಿ ನೀಡುವುದರ ಮೂಲಕ ಮನಃಪರಿವರ್ತನೆ ಯಾಗಿ ಸಾವಯವ ಕೃಷಿಗೆ ಬದಲಾಗುವಂತೆ ಉತ್ತೇಜನ ನೀಡಿ ಎಂದು ತಿಳಿಸಿದರು.

ಕೃಷಿ ಇಲಾಖೆ ಜೊತೆಗೆ ಇತರೆ ಇಲಾಖೆಗಳ ಸಮನ್ವಯತೆಯೊಂದಿಗೆ ಸಾವಯವಗೊಬ್ಬರವಾಗಿ ಕೋಳಿ, ಕುರಿಗೊಬ್ಬರ ಮತ್ತಿತರ ಬಳಸಬಹುದು ಎಂಬುದರ ಬಗ್ಗೆ ಪರಿಶೀಲನೆ ಮಾಡಿ ವರದಿ ಸಿದ್ಧಪಡಿಸಿ ಎಂದು ತಿಳಿಸಿದರು.

ಧರ್ತಿ ಮಾತಾ ಬಚಾಮೋ ನಿಗ್ರಾಣಿ ಸಮಿತಿಗಳ ಕಾರ್ಯವನ್ನು ಚುರುಕುಗೊಳಿಸಿ ರೈತರಲ್ಲಿ ಜಾಗೃತಿ ಮೂಡಿಸಿ ಮಣ್ಣಿನ ಆರೋಗ್ಯದಲ್ಲಿ ಸುಸ್ಥಿರ ಸುಧಾರಣೆಯನ್ನು ತರುವಲ್ಲಿ ಯಶಸ್ವಿಯಾಗಿ ಎಂದು ತಿಳಿಸಿದರು.

ಕಾಡು ಕೃಷಿಗೆ ಹೆಚ್ಚಿನ ಉತ್ತೇಜನ ನೀಡಿ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಅರಿವು ಮೂಡಿಸಿ ಎಂದರಲ್ಲದೆ, ಗುಣಮಟ್ಟದ ಬಿತ್ತನೆ ಬೀಜವನ್ನು ಸಮರ್ಪಕವಾಗಿ ವಿಸರಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಂಟಿ ಕೃಷಿ ನಿರ್ದೇಶಕರಾದ ರಮೇಶ್, ಉಪ ನಿರ್ದೇಶಕರಾದ ಕೋಕಿಲಾ, ರಸಗೊಬ್ಬರ, ಬಿತ್ತನೆ ಬೀಜ ವಿತರಕರು ಸಭೆಯಲ್ಲಿ ಹಾಜರಿದ್ದರು.

## ಸಂತೋಷ್ ಲಾಡ್‌ಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬುದ್ಧ, ಬಸವ ಹಾಗೂ ಅಂಬೇಡ್ಕರ್ ತತ್ವಗಳನ್ನು ಅನುಸರಿಸುವ ಜನನಾಯಕ, ಬಡವರ ಬಂಧು ಹಾಗೂ ನಿಕಟಪೂರ್ವ ಕಾರ್ಮಿಕ ಸಚಿವ ಸಂತೋಷ್ ಎಸ್. ಲಾಡ್ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಮಹತ್ವದ ಸ್ಥಾನ ನೀಡಬೇಕೆಂದು ಸಂತೋಷ್ ಲಾಡ್ ಅಭಿಮಾನಿಗಳ ಬಳಗದ ವಿನೋದ್ ಕುಮಾರ್ ಒತ್ತಾಯಿಸಿದರು.




ನಗರದಲ್ಲಿಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಹಾಗೂ ಬಳಗದ ಮುಖಂಡರು, 2023ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಕಾರ್ಮಿಕ ಸಚಿವರಾಗಿ ಕಾರ್ಯನಿರ್ವಹಿಸಿದ ಸಂತೋಷ್ ಲಾಡ್, ಕಾರ್ಮಿಕರ ಕಲ್ಯಾಣಕ್ಕಾಗಿ ಹಲವು ಐತಿಹಾಸಿಕ ಕ್ರಮ ಜಾರಿಗೆ ತಂದಿದ್ದಾರೆ ಎಂದು ತಿಳಿಸಿದರು.

ಮಹಿಳಾ ಕಾರ್ಮಿಕರಿಗಾಗಿ ಋತುಚಕ್ರ ರಜೆ, ಕಾರ್ಮಿಕರಿಗೆ ಅಪಘಾತ ವಿಮೆ, ವೇತನ ಹೆಚ್ಚಳ, ಕಾರ್ಮಿಕ ಸ್ಮಾರ್ಟ್ ಕಾರ್ಡ್ ಯೋಜನೆ, ನಿರಾಶ್ರಿತ ಹಾಗೂ ವಿಧವಾ ಅಸಂಘಟಿತ ಮಹಿಳಾ ಕಾರ್ಮಿಕರ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮ ಸೇರಿದಂತೆ ಹಲವು ಜನಪರ ಯೋಜನೆ ಜಾರಿಗೆ ತಂದಿರುವುದು ಅವರ ವಿಶೇಷ ಸಾಧನೆಯಾಗಿದೆ ಎಂದು ಹೇಳಿದರು.

ಇದಲ್ಲದೆ ಉತ್ತರಾಖಂಡ ಹಾಗೂ ಕೇರಳ ಪ್ರವಾಹ, ಒಡಿಶಾದ ರೈಲು ದುರಂತ, ಪಹಲ್ಗಾಮ್ ಉಗ್ರರ ದಾಳಿ ಸೇರಿದಂತೆ ವಿವಿಧ ಸಂಕಷ್ಟದ ಸಂದರ್ಭಗಳಲ್ಲಿ ಸ್ಥಳಕ್ಕೆ ತೆರಳಿ ಸಿಲುಕಿದ್ದ ಕನ್ನಡಿಗರನ್ನು ರಕ್ಷಿಸಿ ಸುರಕ್ಷಿತವಾಗಿ ರಾಜ್ಯಕ್ಕೆ ಕರೆ ತರುವ ಮೂಲಕ ಮಾನವೀಯತೆ ಮೆರೆದಿದ್ದಾರೆ ಎಂದು ಶ್ಲಾಘಿಸಿದರು.

ಕೇಂದ್ರ ಸರ್ಕಾರದ ನೀತಿಗಳ ನ್ಯೂನತೆಗಳನ್ನು ಧೈರ್ಯವಾಗಿ ಪ್ರಶ್ನಿಸಿರುವ ಸಂತೋಷ್ ಲಾಡ್ ಅವರಿಗೆ ಸಚಿವ ಸ್ಥಾನ ನೀಡುವುದರಿಂದ ಪಕ್ಷಕ್ಕೆ ಮತ್ತಷ್ಟು ಬಲ ದೊರೆಯಲಿದ್ದು,

2028ರ ಚುನಾವಣೆಯಲ್ಲಿಯೂ ಕಾಂಗ್ರೆಸ್‌ಗೆ ಅನುಕೂಲವಾಗಲಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಹರೀಶ್, ಇಮ್ರಾನ್ ಖಾನ್, ಮೊಹಮ್ಮದ್ ಇರ್ಫಾನ್, ಅಫ್ರೋಜ್ ಹಾಗೂ ರಾಜು ಉಪಸ್ಥಿತರಿದ್ದರು.

# ಅಡಗೂರಿನ ಚಂದ್ರಯ್ಯ ನಾಪತ್ತೆ

## ಎಲ್ಲೇ ಇದ್ದರೂ ಮರಳಿ ಬರುವಂತೆ ಕುಟುಂಬ ಸದಸ್ಯರ ಮನವಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬೇಲೂರು ತಾಲೂಕು ಅಡಗೂರು ಗ್ರಾಮದ ಚಂದ್ರಯ್ಯ ಎಂಬುವರು (65) ಕಳೆದ ಮೇ 9 ರಂದು ಚಿತ್ರದುರ್ಗದಲ್ಲಿ ನಡೆದ ಯಡಿಯೂರಪ್ಪ ಸಂಭ್ರಮೋತ್ಸವ ಕಾರ್ಯಕ್ರಮಕ್ಕೆ ಹೋದವರು ಮರಳಿ ಬಂದಿಲ್ಲ ಎಂದು ಕುಟುಂಬ ಸದಸ್ಯರು ಅಳಲು ತೋಡಿಕೊಂಡರು.

ಕುಟುಂಬದ ಪರವಾಗಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಕೀಲ ಮಂಜುನಾಥ್, ಚಂದ್ರಯ್ಯ ಅವರು ಕಾಣೆಯಾದ ನಂತರ ಅನೇಕ ಕಡೆ ಹುಡುಕಾಡಿದರೂ ಸುಳಿವು ಪತ್ತೆ ಆಗಿಲ್ಲ ಎಂದರು.

ಅಂದು ಊರಿನ ಹತ್ತಾರು ಮಂದಿಯ ಜೊತೆಗೆ ಕೆಎಸ್ಆರ್‌ಟಿಸಿ ಬಸ್‌ನಲ್ಲಿ ಹೋಗಿದ್ದ ಚಂದ್ರಯ್ಯ ಅವರು ನೆಂಟರಿಸ್ಟರ ಮನೆಗೂ ಹೋಗಿಲ್ಲ. ಎಲ್ಲಾದರೂ ಇದ್ದರೆ ಕೂಡಲೇ ಅವರು ಮನೆ ಬರುವಂತೆ ಮನವಿ ಮಾಡಿದರು. ನಾಪತ್ತೆಯಾದ ಬಳಿಕ ಕುಟುಂಬ ಸದಸ್ಯರು ಟಿ.ಟಿ.ವಾಹನ ಮಾಡಿಕೊಂಡು ಚಿತ್ರದುರ್ಗಕ್ಕೆ ಹೋಗಿ ಹುಡುಕಾಡಿದರೂ ಸುಳಿವು ಸಿಕ್ಕಿಲ್ಲ. ಈ ಸಂಬಂಧ ಮೊದಲು ಚಿತ್ರದುರ್ಗ ಠಾಣೆಗೆ ನಂತರ ಹಳೇಬೀಡು ಠಾಣೆಗೆ ದೂರು ನೀಡಿದ್ದರೂ ಯಾವುದೇ ಪ್ರಯೋಜನ ಆಗಿಲ್ಲ ಎಂದರು.

ಚಂದ್ರಯ್ಯ ಅವರು ಸುಮಾರು 5.5 ಅಡಿ ಎತ್ತರವಿದ್ದು, ಸಂಬಂಧಿಕರು ಹಾಗೂ ಕುಟುಂಬ ಸದಸ್ಯರು ವಿವಿಧ ಕಡೆಗಳಲ್ಲಿ ಹುಡುಕಾಟ ನಡೆಸಿದರೂ ಅವರು ಕಂಡು ಬಂದಿಲ್ಲ. ಇನ್ನಾದರೂ ಚಂದ್ರಯ್ಯ ಅವರ ಸುಳಿವು ಸಿಕ್ಕರೆ ಹತ್ತಿರದ ಪೊಲೀಸ್ ಠಾಣೆಗೆ ಅಥವಾ 8431580076, 7406321355 ಹಾಗೂ 7338517741 ಈ ನಂಬರ್‌ಗಳನ್ನು ಸಂಪರ್ಕಿಸುವಂತೆ ಮನವಿ ಮಾಡಿದರು.

ನಮ್ಮ ಕುಟುಂಬದಲ್ಲಿ ಯಾವುದೇ ಜಗಳ ನಡೆದಿಲ್ಲ. ತಂದೆಯವರು ಮನೆಗೆ ಬಂದರೆ ಸಾಕು, ಅಪ್ಪ ಎಲ್ಲಿದ್ದರೂ ನೀವು ಕೂಡಲೇ ಮನೆಗೆ ಬನ್ನಿ ಎಂದು ಪುತ್ರ ಪ್ರಶಾಂತ್ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಂಜುನಾಥ್, ಪತ್ನಿ ಜವರಯ್ಯ, ಕುಮಾರ್ ಇದ್ದರು.

# ಜೆಇಇ: ಜಿಲ್ಲೆಗೆ ತನೀಶ್‌ಚಂದ್ರ ಟಾಪ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ದೇಶದ ಅತ್ಯಂತ ಪ್ರತಿಷ್ಠಿತ ಹಾಗೂ ಸವಾಲಿನ ಪ್ರವೇಶ ಪರೀಕ್ಷೆಗಳಲ್ಲಿ ಒಂದಾದ ಜೆಇಇ ಅಡ್ವಾನ್ಸ್ 2026ರ ಫಲಿತಾಂಶ ಪ್ರಕಟವಾಗಿದ್ದು, ನಗರದ ಪ್ರತಿಭಾವಂತ ವಿದ್ಯಾರ್ಥಿ ತನೀಶ್ ಚಂದ್ರ ಪಿ. ಅವರು ಜಿಲ್ಲೆಗೆ ಪ್ರಥಮ ಸ್ಥಾನ ಗಳಿಸುವ ಮೂಲಕ ಗಮನಾರ್ಹ ಸಾಧನೆ ಮಾಡಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಂಗಳವಾರ ಸಂತಸ ಹಂಚಿಕೊಂಡ ಹಿಮ್ಸ್‌ನಲ್ಲಿ ಪ್ಲಾಸ್ಟಿಕ್ ಸರ್ಜನ್ ಆಗಿರುವ ವಿದ್ಯಾರ್ಥಿ ತಂದೆ ಡಾ.ಪಾಲಚಂದ್ರ ಎ.

ಹಾಗೂ ಸಮುದಾಯ ವೈದ್ಯಕೀಯ ವಿಭಾಗದ ಸಹ-ಪ್ರಾಧ್ಯಾಪಕರಾಗಿರುವ ತಾಯಿ ಡಾ.ಸಿ.ವೈ. ಶ್ರೀಲತಾ ಅವರು, ಜೆಇಇ ಅಡ್ವಾನ್ಸ್ ಪರೀಕ್ಷೆ ಐಐಟಿಗಳಿಗೆ ಪ್ರವೇಶ ನಡೆಯುವ ಅತ್ಯಂತ ಕಠಿಣ ಪರೀಕ್ಷೆಯಾಗಿದ್ದು, ಮಗ ನಮ್ಮಂತೆಯೇ ವೈದ್ಯರಾಗಬೇಕು ಎಂಬ ಆಸೆಯಿತ್ತು. ಆದರೆ ಆತ ಬೇರೆ ಓದುವೆ ಎಂದು ಅದರಲ್ಲಿ ಮೇರು ಸಾಧನೆ ಮಾಡಿರುವುದು ನಮಗೆ ಸಂತೋಷ ತಂದಿದೆ ಎಂದು ನುಡಿದರು.

ನಗರದ ಪೋದಾರ್ ಇಂಟರ್ ನ್ಯಾಷನಲ್ ಶಾಲೆಯಲ್ಲಿ ಪ್ರೌಢಶಿಕ್ಷಣ ಪಡೆದ ಮಗ, ಬೆಂಗಳೂರಿನ ಅಲೆನ್ ಕೆರಿಯಲ್ ಶಾಲೆಯಲ್ಲಿ ಪಿಯುಸಿ ಮುಗಿಸಿ ಇದೀಗ ಜಿಲ್ಲೆಗೆ ಕೀರ್ತಿ ತಂದಿರುವುದು ನಮಗೆ ಸಂತೋಷ ತಂದಿದೆ ಎಂದರು.

ಶ್ರೀಲತಾ ಮಾತನಾಡಿ, ಬಾಲ್ಯದಿಂದಲೇ ಮಗ ಓದಿನಲ್ಲಿ ಏಕಾಗ್ರತೆ ತೋರುತ್ತಿದ್ದ. ವಿಶೇಷವಾಗಿ ಗಣಿತ ಮತ್ತು ವಿಜ್ಞಾನ ವಿಷಯಗಳಲ್ಲಿ ಅಪಾರ ಆಸಕ್ತಿ ಹಾಗೂ ಪ್ರಾವೀಣ್ಯತೆ ತೋರಿದ್ದ. ಆಕಾಶ್ ಬೈಜೂಸ್ ಒಲಂಪಿಯಾಡ್ ಪರೀಕ್ಷೆಗಳನ್ನೂ ಉತ್ತಮ ಪ್ರದರ್ಶನ ತೋರಿದ್ದ. ನಿರಂತರ ಓದು, ಎರಡು ವರ್ಷಗಳ ಕಾಲ ಕಠಿಣ ಪರಿಶ್ರಮ, ನಿರಂತರ ಅಭ್ಯಾಸ, ಮಾದರಿ ಪರೀಕ್ಷೆಗಳು ಮತ್ತು ವಿಷಯವಾರು ವಿಶ್ಲೇಷಣೆಗಳ ಮೂಲಕ ಯಶಸ್ಸಿನ ಹಾದಿ ನಿರ್ಮಿಸಿಕೊಂಡಿದ್ದಾನೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.




> ತಮ್ಮ ಸಾಧನೆ ಕುರಿತು ಮಾತನಾಡಿದ ತನೀಶ್ ಚಂದ್ರ, ಜೆಇಇ ಅಡ್ವಾನ್ಸ್ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆಯುವುದು ನನ್ನ ಬಹುದಿನಗಳ ಕನಸಾಗಿತ್ತು.
>
> ಆ ಶ್ರಮಕ್ಕೆ ಫಲ ಸಿಕ್ಕಿದೆ. ಪ್ರತಿದಿನ ಕಲಿತ ವಿಷಯ ಪುನರಾವರ್ತನೆ ಮಾಡುವುದು, ಮಾಕ್ ಟೆಸ್ಟ್‌ಗಳನ್ನು ಬರೆಯುವುದು ಹಾಗೂ ತಪ್ಪುಗಳನ್ನು ವಿಶ್ಲೇಷಿಸುವುದಕ್ಕೆ ಹೆಚ್ಚು ಸಮಯ ನೀಡಿದ್ದೆ.
>
> ಶಿಕ್ಷಕರ ಮಾರ್ಗದರ್ಶನ ಮತ್ತು ಪೋಷಕರ ಪ್ರೋತ್ಸಾಹದಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ಹೇಳಿದರು.
>
> ಕಂಪ್ಯೂಟರ್ ಸೈನ್ಸ್ ಕ್ಷೇತ್ರದಲ್ಲಿ ವಿಶೇಷ ಆಸಕ್ತಿ ಹೊಂದಿರುವ ಅವರು ವಿಜ್ಞಾನಿ ಆಗುವ ಮೂಲಕ ಸಂಶೋಧನೆ ಮಾಡಿ ಭಾರತದ ಅಭಿವೃದ್ಧಿಗೆ ತನ್ನದೇ ಸೇವೆ ಸಲ್ಲಿಸುವ ಆಸೆ ಹೊಂದಿರುವುದಾಗಿ ನುಡಿದರು.

# ಸಾವಿರಾರು ಮೀನುಗಳ ಮಾರಣ ಹೋಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲ್ಲೂಕಿನ ಬನ್ನೂರು ಗ್ರಾಮದ ದೊಡ್ಡಕೆರೆಯಲ್ಲಿ ಸಾವಿರಾರು ಮೀನುಗಳ ಮಾರಣಹೋಮ ನಡೆದಿದೆ.

ಕೆರೆಯಲ್ಲಿ ಸತ್ತು ತೇಲುತ್ತಿರುವ ಸಾವಿರಾರು ಮೀನುಗಳು ತೇಲುತ್ತಿವೆ, ಇನ್ನೂ ಕೆಲವು ಹೊರಗಡೆ ರಾಶಿ ರಾಶಿಯಾಗಿ ಬಿದ್ದಿರುವುದು ಅಯ್ಯೋ ಎನಿಸುವಂತಿದೆ.

ವಡೆನೂರು ಗ್ರಾಮದ ಶಿವಣ್ಣ ಎಂಬುವರು 65 ಸಾವಿರಕ್ಕೆ ಮೀನು ಸಾಕಲು ಕೆರೆ ಗುತ್ತಿಗೆ ಪಡೆದಿದ್ದರು. ಒಂದು ಮೀನಿನ ಮರಿಗೆ 3 ರೂಪಾಯಿಯಂತೆ ಖರೀದಿಸಿ 1 ಲಕ್ಷ ಮೀನಿನ ಮರಿಗಳನ್ನು ಕೆರೆಗೆ ಬಿಟ್ಟಿದ್ದರು.

ಅವೆಲ್ಲ ಬೆಳೆದು ತಿನ್ನ ಯೋಗ್ಯವಾಗಿದ್ದವು. ಇದೀಗ ಸುಮಾರು ಒಂದು, ಒಂದೂವರೆ ಕೆಜಿ ತೂಕದ ಸಾವಿರಾರು ಮೀನುಗಳು ಕೆರೆಯಲ್ಲಿ ಸಾವನ್ನಪ್ಪಿವೆ. ಬಹುಶಃ ಕೆರೆಗೆ ವಿಷ ಬೆರೆಸಿರುವ ಅಥವಾ ನೀರು ಕಡಿಮೆಯಾಗಿ ಗಾಳಿ ಕೊರತೆಯಿಂದ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ. ಇದರಿಂದ ಶಿವಣ್ಣ ಲಕ್ಷಾಂತರ ರೂ.ನಷ್ಟ ಅನುಭವಿಸಿದ್ದಾರೆ.



ಇನ್ನೂ ಕೆರೆಯಲ್ಲಿ ಸಾಯುತ್ತಲೇ ಇದ್ದು, ಬದುಕುಳಿಸುವುದು ಸವಾಲಾಗಿದೆ. ಇವುಗಳನ್ನು ತಿಂದಲೂ ಆರೋಗ್ಯಕ್ಕೆ ಏನಾದರೂ ಆದೀತು ಎಂದು ಗ್ರಾಮಸ್ಥರು ಹಿಂಜರಿಯುತ್ತಿದ್ದಾರೆ. ಸೂಕ್ತ ಪರಿಹಾರ ನೀಡುವಂತೆ ಸರ್ಕಾರಕ್ಕೆ ಶಿವಣ್ಣ ಸರ್ಕಾರವನ್ನು ಒತ್ತಾಯಿಸಿದ್ದಾರೆ.

## ಜೂ.6 ರಂದು ಶ್ರೀನಿವಾಸ ಕಲ್ಯಾಣೋತ್ಸವ




ಅರಸೀಕೆರೆ: ಸನಾತನ ಧರ್ಮದ ಆಚಾರ ವಿಚಾರದ ಬಗ್ಗೆ ಅಪಾರ ನಂಬಿಕೆ ಹೊಂದಿರುವ ತಾಲೂಕಿನ ಪುರಾತನ ಗ್ರಾಮಗಳಲ್ಲಿ ಒಂದಾಗಿರುವ ಮುದುಡಿ ಗ್ರಾಮ ಮತ್ತೊಂದು ಐತಿಹಾಸಿಕ ಕಾರ್ಯಕ್ರಮಕ್ಕೆ ಸಜ್ಜಾಗುತ್ತಿದೆ ಎಂದು ಶ್ರೀ ವೀರಾಂಜನೇಯ ಸೇವಾ ಸಮಿತಿ ಟ್ರಸ್ಟ್ ನ ಅಧ್ಯಕ್ಷ ಚಂದ್ರಶೇಖರ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕ ಕಲ್ಯಾಣಾರ್ಥ ವಾಗಿ ಮುದುಡಿ ಗ್ರಾಮದಲ್ಲಿ ಜೂನ್ 6 ಶನಿವಾರ ಸಂಜೆ ಶ್ರೀದೇವಿ ಭೂದೇವಿಯೊಂದಿಗೆ ಶ್ರೀನಿವಾಸ ಕಲ್ಯಾಣೋತ್ಸವವನ್ನು ಟ್ರಸ್ಟ್ ಹಾಗೂ ಗ್ರಾಮಸ್ಥರು ಶ್ರದ್ಧಾಭಕ್ತಿಯೊಂದಿಗೆ ಹಮ್ಮಿಕೊಂಡಿರುವದಾಗಿ ತಿಳಿಸಿದರು.

ಧರೆಯ ವೈಕುಂಠ ಎಂದೇ ಪ್ರಸಿದ್ಧಿಯಾಗಿರುವ ತಿರುಪತಿ ಸೇರಿದಂತೆ ಕರ್ನಾಟಕ ಆಂಧ್ರ ಪ್ರದೇಶ ಹಾಗೂ ತೆಲಂಗಾಣ ಸೇರಿದಂತೆ ಇತರೆ ರಾಜ್ಯಗಳಲ್ಲಿ ಏಳು ನೂರಕ್ಕೂ ಹೆಚ್ಚು ಬಾರಿ ಶ್ರೀ ಶ್ರೀನಿವಾಸ ಕಲ್ಯಾಣೋತ್ಸವ ನಡೆಸಿ ಕೊಟ್ಟಿರುವ ಬೆಂಗಳೂರಿನ ಶ್ರೀವಾರಿ ಫೌಂಡೇಶನ್‌ನ ಎಸ್ ವೆಂಕಟೇಶ್ ಮೂರ್ತಿ ಅವರ ನೇತೃತ್ವದ ಆಗಮಿಕರ ತಂಡ ಮುದುಡಿ ಗ್ರಾಮದಲ್ಲಿ ನಡೆಯುವ ಶ್ರೀನಿವಾಸ ಕಲ್ಯಾಣೋತ್ಸವ ನಡೆಸಿಕೊಡಲಿದ್ದು, ತಾಲೂಕಿನ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ಮೂಲಕ ಶ್ರೀದೇವಿ ಭೂದೇವಿ ಸಮೇತನಾದ ಶ್ರೀನಿವಾಸನ ಅನುಗ್ರಹಕ್ಕೆ ಪಾತ್ರರಾಗುವಂತೆ ಮನವಿ ಮಾಡಿದರು.

ಲಕ್ಷ್ಮಿ ಮತ್ತು ಪದ್ಮಾವತಿಯನ್ನು ವರಿಸುವ ಶ್ರೀನಿವಾಸನ ಕಲ್ಯಾಣೋತ್ಸವ ಕಣ್ತುಂಬಿಕೊಳ್ಳುವುದು ಬದುಕಿನ ಸಾರ್ಥಕ ಕ್ಷಣಗಳಲ್ಲಿ ಒಂದಾಗಿದೆ. ಇಂತಹ ಅಪೂರ್ವ ಅವಕಾಶವನ್ನು ಭಕ್ತರು ಸದುಪಯೋಗ ಪಡೆದುಕೊಳ್ಳುವ ಮೂಲಕ ಶ್ರೀ ದೇವಿ ಭೂದೇವಿ ಸಮೇತನಾದ ಶ್ರೀನಿವಾಸನ ಅನುಗ್ರಹಕ್ಕೆ ಪಾತ್ರ ಆಗುವಂತೆ ಕೋರಿದರು.

ಕಲ್ಯಾಣೋತ್ಸವದಲ್ಲಿ ಪಾಲ್ಗೊಳ್ಳುವ ಭಕ್ತಾದಿಗಳಿಗೆ ಆಯೋಜನ ಸಮಿತಿ ವತಿಯಿಂದ ಸಾಮೂಹಿಕ ಅನ್ನಸಂತರ್ಪಣೆ ಸಹ ಆಯೋಜಿಸಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಗುಂಡೂರಾವ್, ನಾಗೇಂದ್ರ, ಶಿವಪ್ಪ, ಕುಮಾರ್, ಜಯಣ್ಣ, ಜಯಸಿಂಹ, ಪ್ರಸಾದ್, ಶಾಂತ ಮೊದಲಾದವರಿದ್ದರು.

## ಕೆಎಂಶಿಗೆ ಸಚಿವ ಸ್ಥಾನ ನೀಡಲು ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ : ಹಿಂದುಳಿದ ಸಮಾಜಗಳ ಬಗ್ಗೆ ಅಪಾರ ಕಾಳಜಿ, ಗ್ರಾಮೀಣ ಭಾಗದ ಜನತೆಯ ನೋವು ನಲಿವುಗಳನ್ನು ಅರಿತಿರುವ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರಿಗೆ ಮಂತ್ರಿ ಸ್ಥಾನ ಕೊಟ್ಟದ್ದೇ ಆದರೆ ಜಿಲ್ಲೆಯಲ್ಲಿ ಮಾತ್ರವಲ್ಲ, ಮೈಸೂರು ಕರ್ನಾಟಕ ಹಾಗೂ ಮಧ್ಯ ಕರ್ನಾಟಕದ ಭಾಗದಲ್ಲಿ ಪಕ್ಷ ಸಂಘಟನೆಗೆ ಶಕ್ತಿ ಬರುತ್ತದೆ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಹಾಗೂ ಕುರುಬ ಸಮಾಜದ ಮುಖಂಡ ಬಿಳಿ ಚೌಡಯ್ಯ ಕಾಂಗ್ರೆಸ್ ಹೈಕಮಾಂಡ್‌ಗೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಸತತ 4ನೇ ಬಾರಿ ಶಾಸಕರಾಗಿ ಗೃಹ ಮಂಡಳಿಯ ಅಧ್ಯಕ್ಷರಾಗಿ ಯಶಸ್ವಿಯಾಗಿ ಸೇವೆ ಸಲ್ಲಿಸುತ್ತಿರುವ ಶಾಸಕರ ಕಾರ್ಯವೈಖರಿ ಹಾಗೂ ಸದನದ ಒಳಗೆ ಅವರು ಮಾತನಾಡುವ ರೀತಿ ನೀತಿ ಜನತೆಯ ಮೆಚ್ಚುಗೆಗೆ ಕಾರಣವಾಗಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಾಗೂ ಭಾವಿ ಮುಖ್ಯಮಂತ್ರಿ ಗಳಾಗಿರುವ ಡಿ.ಕೆ ಶಿವಕುಮಾರ್ ಅವರು ಇದನ್ನು ಪರಿಗಣಿಸಿ ನೂತನ ಸರ್ಕಾರದ ಸಚಿವ ಸಂಪುಟದಲ್ಲಿ ಅವಕಾಶ ಕಲ್ಪಿಸಿ ಕೊಡುವಂತೆ ಮನವಿ ಮಾಡಿದರು.




ಸುದ್ದಿಗೋಷ್ಠಿಯಲ್ಲಿ ಭಕ್ತ ಕನಕದಾಸ ಹಾಗೂ ಸಂಗೊಳ್ಳಿ ರಾಯಣ್ಣ ಜಯಂತೋತ್ಸವ ಆಚರಣೆ ಸಮಿತಿ ಅಧ್ಯಕ್ಷ ಕುರುಬ ಸಮಾಜದ ಮುಖಂಡರಾದ ಶಿವಪ್ಪ, ಮೋಕ್ಷರಾಜ್, ಪರಮೇಶ್ ರವಿ ಸೇರಿದಂತೆ ಮತ್ತು ಇತರರು ಉಪಸ್ಥಿತರಿದ್ದರು.

ವಿಶೇಷ ಪೂಜೆ : ಇದೇ ವೇಳೆ ಶಿವಲಿಂಗೇಗೌಡರು ನೂತನ ಸರ್ಕಾರದಲ್ಲಿ ಸಚಿವರಾಗಬೇಕು ಎಂದು ಅವರ ಅಭಿಮಾನಿಗಳು ಹಾಗೂ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು ನಗರದ ಗಣಪತಿ ದೇವಾಲಯ ಯಾದಾಪುರದ ಜನಕ ಸಿದ್ದೇಶ್ವರ, ಗಂಡಸಿ ಸೇರಿದಂತೆ ಇತರೆ ತಮ್ಮ ನೆಚ್ಚಿನ ದೇವರುಗಳಿಗೆ ವಿಶೇಷ ಪೂಜೆ ಮಾಡಿಸುತ್ತಿದ್ದು ಮತ್ತು ಕೆಳಗಡೆ ದೇವಾಲಯದ ಮುಂದೆ ಈಡುಗಾಯಿ ಒಡೆಯುವ ಮೂಲಕ ದೇವರ ಮೊರೆ ಹೋಗುತ್ತಿರುವುದು ಕಂಡು ಬರುತ್ತದೆ. ವಿಶೇಷ ಪೂಜೆಗಳೂ ನಡೆಯುತ್ತಿವೆ.

# ಸರ್ಕಾರಿ ಶಾಲೆಗಳಿಗೆ ಮಕ್ಕಳ ದಾಖಲಾತಿಗೆ ಒತ್ತು ನೀಡಲು ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಗ್ರಾಮೀಣ ಭಾಗದಲ್ಲಿರುವ ಸರ್ಕಾರಿ ಶಾಲೆಗಳಿಗೆ ಮಕ್ಕಳ ದಾಖಲಾತಿಗೆ ಹೆಚ್ಚಿನ ಒತ್ತು ನೀಡುವುದರ ಜೊತೆಗೆ ಉತ್ತಮ ಶಿಕ್ಷಣ ಒದಗಿಸಲು ಶಾಸಕರಾದ ಸ್ವರೂಪ ಪ್ರಕಾಶ್ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಹರಳಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿಂದು ನಡೆದ ಜಿಲ್ಲಾ ಮಟ್ಟದ 2026-27 ಸಾಲಿನ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಮಕ್ಕಳ ಭವಿಷ್ಯ ಉಜ್ವಲವಾಗಲಿ ಎಂದು ಶುಭ ಹಾರೈಸಿದರು.

ದಾಸರು ಕೊಪ್ಪಲು ಮತ್ತು ಹರಳಹಳ್ಳಿ ಶಾಲೆಯ ಶಿಕ್ಷಕರು ಬದ್ಧತೆಯಿಂದ ಕೆಲಸ ನಿರ್ವಹಿಸುತ್ತಿದ್ದು, ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆ ಗು ಒತ್ತು ನೀಡಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಶ್ಲಾಘಿಸಿದರು.

ಸದರಿ ಶಾಲೆಯನ್ನು ಕೆ.ಪಿ.ಎಸ್.ಶಾಲೆಗೆ



ಆಯ್ಕೆ ಮಾಡಿದ್ದು, ಮಕ್ಕಳಿಗೆ ಮುಂದಿನ ದಿನಗಳಲ್ಲಿ ಪಿ.ಯು.ಸಿ.ವರೆಗೆ ಶಿಕ್ಷಣ ದೊರೆಯಲಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಜಿಲ್ಲೆ ಹಾಗೂ ರಾಜ್ಯಾದ್ಯಂತ ಇಂದು ಅತ್ಯಂತ ಸಂತೋಷ,ಸಂಭ್ರಮ ಮತ್ತು ಸಡಗರದಿಂದ ಶಾಲಾ ಪ್ರಾರಂಭೋತ್ಸವ ನಡೆಯತ್ತಿದೆ ಮಕ್ಕಳ ಸಂಪೂರ್ಣ ಬೆಳವಣಿಗೆಗೆ ಪೂರಕವಾಗಿ ಗುಣಮಟ್ಟದ ಶಿಕ್ಷಣ ನೀಡುವುದು ಸರ್ಕಾರಿ ಶಾಲೆಗಳ ಗುರಿಯಾಗಿದೆ ಎಂದು ತಿಳಿಸಿದರು.

ಮಕ್ಕಳು ಪ್ರತಿದಿನ ಕಠಿಣ ಪರಿಶ್ರಮ ಹಾಕಿ ಏಕಾಗ್ರತೆಯಿಂದ ಕಲಿಯುವಂತೆ ತಿಳಿಸಿದರು. ಸರ್ಕಾರಿ ಶಾಲೆಗಳ ಮಕ್ಕಳ ಭವಿಷ್ಯ ಉಜ್ವಲವಾಗಲು ಗುಣಮಟ್ಟದ ಶಿಕ್ಷಣ ನೀಡಲು ಶಿಕ್ಷಕರು ಹೆಚ್ಚಿನ ಕಾಳಜಿ ವಹಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ಎಸ್ ಎಸ್ ಎಲ್ ಸಿ ಪರೀಕ್ಷೆ ಬರೆದ ಎಲ್ಲಾ ಮಕ್ಕಳು ಉತ್ತೀರ್ಣರಾಗಿದ್ದು, ಶೇ.ನೂರರಷ್ಟು ಫಲಿತಾಂಶ ಬಂದಿದೆ ಎಂದು ತಿಳಿಸಿದರು.

ಹಾಸನ ಜಿಲ್ಲೆಯನ್ನು ಹಸಿರು ಹಾಸನವಾಗಿ ನಿರ್ಮಾಣ ಮಾಡುವ ನಿಟ್ಟಿನಲ್ಲಿ 5 ಲಕ್ಷ ಸಸಿಗಳನ್ನು ನೆಟ್ಟು ಪೋಷಣೆ ಮಾಡಲು ಜಿಲ್ಲಾಡಳಿತ ನಿರ್ಧರಿಸಿದೆ ಎಂದು ತಿಳಿಸಿದರು.

ಹರಳಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಗಿಡಗಳನ್ನು ನೆಟ್ಟು ಪೋಷಣೆ ಮಾಡಿ ಹಚ್ಚ ಹಸುರಿನಿಂಗ ಕಂಗೊಳಿಸುವ ರೀತಿಯಲ್ಲಿ ನಿರ್ವಹಣೆ ಮಾಡಿರುವುದಕ್ಕಾಗಿ ಅಭಿನಂದನೆಗಳನ್ನು ತಿಳಿಸಿದರಲ್ಲದೆ, ಇದೇರೀತಿ ಎಲ್ಲಾ ಶಾಲಾ ಆವರಣದಲ್ಲಿ ಗಿಡಗಳನ್ನು ನೆಟ್ಟು ಪೋಷಣೆ ಮಾಡಲು ಮುಂದಾಗಬೇಕು ಎಂದರು.

ಉತ್ತಮ ಪರಿಸರಕ್ಕಾಗಿ ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಮಕ್ಕಳಿಗೆ ಜಾಗೃತಿ ಮೂಡಿಸಿ ಹಸಿ ಕಸ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ಬೇರ್ಪಡಿಸಿ ನೀಡುವುದು, ಪ್ಲಾಸ್ಟಿಕ್ ಬಳಕೆ ಮಾಡದಂತೆ ಹಾಗೂ ಕಸವನ್ನು ಎಲ್ಲೆಂದರಲ್ಲಿ ಹಾಕದಂತೆ ಮನವರಿಕೆ ಮಾಡಿಕೊಡು ವಂತೆ ಶಿಕ್ಷಕರಿಗೆ ಸೂಚನೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಲರಾಂ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಉತ್ತಮ ಕಲಿಕೆ ಉತ್ತಮ ಭವಿಷ್ಯ ಎಂಬ ಘೋಷ ವಾಕ್ಯದೊಂದಿಗೆ ಈ ಬಾರಿಯ ಶೈಕ್ಷಣಿಕ ವರ್ಷವನ್ನು ಪ್ರಾರಂಭಿಸಲಾಗುತ್ತಿದೆ ಎಂದು ತಿಳಿಸಿದರು.ಸಮವಸ್ತ್ರ, ಪಠ್ಯಪುಸ್ತಕಗಳನ್ನು ಕೂಡ ಇಂದು ವಿತರಿಸಲಾಗುತ್ತಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮಕ್ಕಳಿಗೆ ಸಾಂಕೇತಿಕವಾಗಿ ಸಮವಸ್ತ್ರ, ಪಠ್ಯಪುಸ್ತಕಗಳನ್ನು ವಿತರಿಸಲಾಯಿತು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶುಭಂ ಶುಕ್ಲ, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಸುಮಿತ್ರ, ಡಯಟ್ ಪ್ರಾಂಶುಪಾಲರಾದ ರುದ್ರೇಶ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗೆ ಅರ್ಜಿ ಆಹ್ವಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಅರಕಲಗೂಡು ಶಿಶು ಅಭಿವೃದ್ಧಿ ಯೋಜನೆಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ-08 ಮತ್ತು ಅಂಗನವಾಡಿ ಸಹಾಯಕಿ-57 ಹುದ್ದೆ ಸೇರಿದಂತೆ ಒಟ್ಟು 65 ಗೌರವ ಸೇವೆಯ ಹುದ್ದೆಗಳನ್ನು ಭರ್ತಿ ಮಾಡಲು ಆಫ್‌ಲೈನ್ ಮೂಲಕ ಅರ್ಹ ಮಹಿಳಾ ಮತ್ತು ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಅರಕಲಗೂಡು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗಳಿಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಅರ್ಜಿಗಳನ್ನು ಪಡೆದು ಸಲ್ಲಿಸಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು, ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ನೇಮಕಾತಿಯ ಮಾರ್ಗಸೂಚಿ/ ನಿಬಂಧನೆಗಳನ್ನು ಸ್ಪಷ್ಟವಾಗಿ ಓದಿಕೊಂಡು ನೀಡಲಾಗಿರುವ ಸೂಚನೆಯಂತೆ ಅರ್ಜಿಗಳನ್ನು ಭರ್ತಿಮಾಡಿ ಅವಶ್ಯ ದಾಖಲೆಗಳ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಗೆಜೆಟೆಡ್ ಅಧಿಕಾರಿಗಳಿಂದ ದೃಡೀಕರಿಸಿ ಲಗತ್ತಿಸಿ ಅರ್ಜಿ ಸಲ್ಲಿಸುವುದು, ಆಫ್‌ಲೈನ್ ಮೂಲಕವೇ ಎಲ್ಲಾ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವುದು ಹಾಗೂ ಅಂತಿಮ ದಿನಾಂಕದ ನಂತರ ಸಲ್ಲಿಸುವ ದಾಖಲಾತಿಗಳನ್ನು ಪರಿಗಣಿಸಲಾಗುವುದಿಲ್ಲ, ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ 19 ವರ್ಷ ಪೂರ್ಣಗೊಂಡಿರಬೇಕು ಹಾಗೂ 35 ವರ್ಷ ಮೀರಿರಬಾರದು ಹಾಗೂ ವಿಕಲಚೇತನರಿಗೆ 10 ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ, ಅಭ್ಯರ್ಥಿಯು ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಕನಿಷ್ಠ ವಿದ್ಯಾರ್ಹತೆ ದ್ವಿತೀಯ ಪಿ.ಯು.ಸಿ ತೇರ್ಗಡೆ ಹಾಗೂ ಅಂಗನವಾಡಿ ಸಹಾಯಕಿ ಹುದ್ದೆಗೆ ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ತರಗತಿಯಲ್ಲಿ ಹೊಂದಿರಬೇಕು, ಅಭ್ಯರ್ಥಿಯು ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಎಸ್.ಎಸ್.ಎಲ್.ಸಿ ಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಓದಿರಬೇಕು.

ಅರ್ಜಿ ಸಲ್ಲಿಸಲು ಜುಲೈ 01 ಕೊನೆಯ ದಿನಾಂಕವಾಗಿರುತ್ತದೆ, ಸಂಬಂಧ ಅರ್ಜಿ ನಮೂನೆಯನ್ನು ಅರಕಲಗೂಡು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಪಡೆದು ಅವಶ್ಯಕ ದಾಖಲಾತಿಗಳೊಂದಿಗೆ ಮುಚ್ಚಿದ ಲಕೋಟೆಯಲ್ಲಿ ಕಚೇರಿಗೆ ಸಲ್ಲಿಸುವುದು, ಹೆಚ್ಚಿನ ಮಾಹಿತಿಗಾಗಿ ಅರಕಲಗೂಡು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

# ಡಾ.ವಿ.ಬಿ ಬಾಳ ಪಯಣ ಪುಸ್ತಕ ಬಿಡುಗಡೆ ಹಿನ್ನೆಲೆ: ಪೂರ್ವಭಾವಿ ಸಭೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸೇವಾರತ್ನ ಡಾ.ವೀರಭದ್ರಪ್ಪ ಅವರ ಬಾಳ ಪಯಣ ಪುಸ್ತಕ ಬಿಡುಗಡೆಯ ಪೂರ್ವಭಾವಿ ಸಭೆ ಇಂದು ಕನ್ನಡ ಸಾಹಿತ್ಯ ಭವನದಲ್ಲಿ ನಡೆಯಿತು.

ಇದೇ ತಿಂಗಳ 24 ರಂದು ನಗರದ ಕಲಾಭವನದಲ್ಲಿ ಸೇವಾರತ್ನ - ಡಾ. ವೀರಭದ್ರಪ್ಪ ಅವರ ಬಾಳ ಪಯಣ ಪುಸ್ತಕ ಬಿಡುಗಡೆ ಕಾರ್ಯಕ್ರಮ ನಡೆಸಲು ತಿರ್ಮಾನ ಮಾಡಲಾಯಿತು.

ಶ್ರೀ ಸುತ್ತೂರು ಸ್ವಾಮೀಜಿ, ಒಕ್ಕಲಿಗರ ಮಠದ ಸ್ವಾಮೀಜಿ, ಆದಿಚುಂಚನಗೀರಿ ಸ್ವಾಮಿಜಿ, ಕೋಡಿಮಠದ ಸ್ವಾಮೀಜಿ ಅವರನ್ನು ಒಳಗೊಂಡಂತೆ ಇತರೆ ಸ್ವಾಮೀಜಿರವರು, ಮಾಜಿ ಸಚಿವ ಪಿ.ಜಿ.ಅರ್ ಸಿಂಧ್ಯಾ, ಸಂಸದ ಶ್ರೇಯಸ್ ಪಟೇಲ್ ಅವರ ಉಧ್ಘಾಟನೆಯೊಂದಿಗೆ ಹಾಸನ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಅಧ್ಯಕ್ಷತೆಯಲ್ಲಿ ಹಾಗೂ ಇತರ ಮುಖ್ಯ ಅಥಿತಿಗಳ ಸಮ್ಮುಖದಲ್ಲಿ ನಡೆಸಲು ತಿರ್ಮಾನಿಸಲಾಯಿತು.

ಪೂರ್ವಭಾವಿ ಸಭೆಯ ಅಧ್ಯಕತೆಯನ್ನು ಜಿಲ್ಲಾ ವೀರಶೈವ ಲಿಂಗಾಯತ ಸಂಘದ ಅಧ್ಯಕ್ಷರಾದ ಬಿ.ಪಿ. ಐಸಾಮಿಗೌಡರು ವಹಿಸಿದ್ದರು.

ಸಭೆಯಲ್ಲಿ, ಹಾಸನ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಡಾ.ಹೆಚ್ ಎಲ್.ಮಲ್ಲೇಶ್ ಗೌಡರು, ಹಾಸನ ನಗರಪ್ರಾಧೀಕಾರದ ಮಾಜಿ ಅಧ್ಯಕ್ಷರಾದ ಬಿ. ಕೆ. ಮಂಜುನಾಥ್, ಹಿರಿಯ ಪತ್ರಕರ್ತರಾದ ಅರ್.ಪಿ ವೆಂಕಟೇಶ್ ದೂರ್ತಿ, ಲೀಲಾವತಿ, ಹಾಸನ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷರಾದ ಕಟ್ಟಾಯ ಶಿವಕುಮಾರ್, ದರ್ಪಣ ಪತ್ರಿಕೆಯ ಸಂಪಾದಕರಾದ ಗೋಪಾಲ್, ಹಾಗೂ ಸೇವಾರತ್ನ -ಡಾ. ವೀರಭದ್ರಪ್ಪ ರವರ ಬಾಳ ಪಯಣ ಪುಸ್ತಕವನ್ನು ಬರೆದ ಶಿಕ್ಷಕರಾದ ಬಿ.ಎಸ್. ವನಜಾಕ್ಷಿ , ಜಯ ರಮೇಶ್, ಪುಟ್ಟಸ್ವಾಮಿಗೌಡ, ಗ್ಯಾರಂಟಿ ರಾಮಣ್ಣ, ಮತ್ತಿತರರು ಭಾಗವಹಿಸಿದ್ದರು, ಜೂ. 6 ರ ಶನಿವಾರ ಸಂಜೆ 5 ಗಂಟೆಗೆ ಇನ್ನೊಂದು ಸಭೆ ಕರೆಯಲಾಗಿದೆ ಈ ಸಭೆಗೆ ಎಲ್ಲರೂ ಭಾಗಹಿವಿಸುವಂತೆ ಕೋರಿದೆ ತಾವುಗಳು ಭಾಗವಹಿಸಲು ಕೋರಲಾಗಿದೆ.

# ಕಾಣೆಯಾದವರ ಪತ್ತೆಗೆ ಸಹಕರಿಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಪಟ್ಟಣದ ಮೇಗಲಕೇರಿ ಬಡಾವಣೆಯ ನಿವಾಸಿ ಅರುಣ್ ಕುಮಾರ್ ಬಿನ್ ಜಯರಾಮ (29) ಕೆಲಸ ನಿಮ್ಮಿತ್ತ ಮನೆಯಿಂದ ಹೋದವರು ನಾಪತ್ತೆಯಾಗಿರುತ್ತಾರೆ.

ಇತ್ತೀಚೆಗೆ ಕೆಲಸ ನಿಮಿತ್ತ ಮನೆಯಿಂದ ಹೋದವರು ಇದುವರೆಗೂ ಪತ್ತೆಯಾಗಿರುವುದಿಲ್ಲ. ಇದರಿಂದ ಗಾಬರಿಗೊಂಡ ಕುಟುಂಬದವರು



ಸ್ನೇಹಿತರು ಹಾಗು ಸಂಬಂಧಿಕರ ಮನೆಗಳಲ್ಲಿ ಹುಡುಕಿದರೂ ಪತ್ತೆಯಾಗಿಲ್ಲ.

ಕಾಣೆಯಾದವರ ಚಹರೆ: 5.5 ಅಡಿ ಎತ್ತರ, ಸಾಧಾರಣ ಮೈಕಟ್ಟು, ದುಂಡು ಮುಖ, ಗೋಧಿ ಮೈಬಣ್ಣ, ಕನ್ನಡ ಭಾಷೆ ಮಾತನಾಡುತ್ತಾರೆ. ಹಳದಿ ಬಣ್ಣದ ಟಿ-ಶರ್ಟ್ ಮತ್ತು ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ.

ಇವರ ಬಗ್ಗೆ ಸುಳಿವು ಕಂಡು ಬಂದಲ್ಲಿ ಚನ್ನರಾಯಪಟ್ಟಣ ನಗರ ಪೊಲೀಸ್ ಠಾಣೆ -08176 -252333 , ನಗರ ಠಾಣಾ ಸಿಪಿಐ ಮೊ. 9480804767, ನಗರ ಠಾಣಾ ಪಿಎಸೈ ಮೊ:9480804779 ಅಥವಾ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕೆಂದು ಸಂಪರ್ಕಿಸಲು ಪೊಲೀಸರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ರಾಜಣ್ಣ ಅವರಿಗೆ ಮತ್ತೆ ಮಂತ್ರಿ ಕೊಡಿ

## ಜಾರಕಿಹೊಳಿಗೆ ಡಿಸಿಎಂ ಜೊತೆಗೆ ಪ್ರಬಲ ಖಾತೆ ನೀಡಲು ಸಮುದಾಯದ ಮುಖಂಡರ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಿಯೋಜಿತ ಸಿಎಂ ಡಿ.ಕೆ.ಶಿವಕುಮಾರ್ ಅವರ ಮಂತ್ರಿ ಮಂಡಲದಲ್ಲಿ ನಾಯಕ ಸಮುದಾಯದ ಹಿರಿಯ ನಾಯಕರಾದ ಮಾಜಿ ಸಚಿವ ಕೆ.ಎನ್.ರಾಜಣ್ಣ ಅವರಿಗೆ ಮಂತ್ರಿಸ್ಥಾನ ಹಾಗೂ ಮತ್ತೊಬ್ಬ ಪ್ರಭಾವಿ ನಾಯಕ ಬೆಳಗಾವಿಯ ಸತೀಶ್ ಜಾರಕಿಹೊಳಿ ಅವರಿಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನದ ಜೊತೆಗೆ ಪ್ರಬಲ ಖಾತೆ ನೀಡಬೇಕು ಎಂದು ಹಾಸನ ಜಿಲ್ಲಾ ವಾಲ್ಮೀಕಿ ಸಮಾಜ ಒತ್ತಾಯಿಸಿದೆ.

ಈ ಕುರಿತು ಹೇಳಿಕೆ ನೀಡಿರುವ ಸಮಾಜದ ಜಿಲ್ಲಾಧ್ಯಕ್ಷ ಮಧು ನಾಯಕ, ಪ್ರಧಾನ ಕಾರ್ಯದರ್ಶಿ ಬ್ರಹ್ಮದೇವರಹಳ್ಳಿ ಶಿವಪ್ಪನಾಯಕ ಹಾಗೂ ಗೌರವ ಅಧ್ಯಕ್ಷ ಧರ್ಮಪ್ಪ ನಾಯಕ, ಈ ಇಬ್ಬರು ನಾಯಕರಿಗೆ ಉತ್ತಮ ಅವಕಾಶ ನೀಡಿದರೆ ಅದರಿಂದ ಪಕ್ಷಕ್ಕೆ ಹಾಗೂ ಸಮುದಾಯಕ್ಕೂ ಅನುಕೂಲವಾಗಲಿದೆ ಎಂದಿದ್ದಾರೆ.

ಸತೀಶ್ ಜಾರಕಿಹೊಳಿ ಅವರು ರಾಜ್ಯದ ಪ್ರಶ್ನಾತೀತ ನಾಯಕರು, ಆಹಿಂದ ಮತ್ತು ಶೋಷಿತ ಸಮುದಾಯಗಳ ಪರವಾಗಿ ಸುಮಾರು 30 ವರ್ಷಗಳಿಂದ ನಿರಂತರವಾಗಿ ಕೆಲಸ ನಿರ್ವಹಿಸಿಕೊಂಡು ಬಂದಿದ್ದಾರೆ. ಇವರು ರಾಜಕೀಯ ಕ್ಷೇತ್ರಕ್ಕೆ ಸೀಮಿತವಾಗದೆ, ಸಾಮಾಜಿಕವಾಗಿಯೂ ಉತ್ತಮ ಸೇವೆ ಮಾಡುತ್ತಿದ್ದಾರೆ.

ತಮ್ಮ ಸ್ವಂತ ಹಣದಿಂದ ಹಲವಾರು ತರಬೇತಿ ಕೇಂದ್ರಗಳನ್ನು

ಸ್ಥಾಪನೆ ಮಾಡಿ ವಿವಿಧ ರೀತಿಯ ತರಬೇತಿ ನೀಡುವ ಮೂಲಕ ಯುವಕರು, ಮಹಿಳೆಯರನ್ನು ಸ್ವಾವಲಂಬಿಗಳಾಗಿ ಮಾಡುತ್ತಿದ್ದಾರೆ. ರಾಜ್ಯದಲ್ಲಿ ನಿರಂತರವಾಗಿ ಬುದ್ಧ, ಬಸವ, ಅಂಬೇಡ್ಕರ್ ಅನುಯಾಯಿಯಾಗಿ ಕೆಲಸ ನಿರ್ವಹಿಸಿಕೊಂಡು ಬರುತ್ತಿದ್ದು, ರಾಜ್ಯದ ಆಹಿಂದ ವರ್ಗದ ಏಕೈಕ ನಾಯಕ ಸತೀಶ್ ಜಾರಕಿಹೊಳಿ ಎಂದಿದ್ದಾರೆ.

2023ರ ಸಾರ್ವತ್ರಿಕ ಚುನಾವಣೆಯಲ್ಲಿ ಪರಿಶಿಷ್ಟ ಪಂಗಡದ 14 ಶಾಸಕರು, ಸಾಮಾನ್ಯ ಕ್ಷೇತ್ರದಲ್ಲಿಯೂ ಒಬ್ಬರೂ ಗೆಲ್ಲಲು, ನಂತರ 3 ಲೋಕಸಭಾ ಕ್ಷೇತ್ರದಲ್ಲಿ ನಾಯಕ ಸಮುದಾಯದವರು ಗೆಲ್ಲಲು ಸತೀಶ್ ಜಾರಕಿಹೊಳಿ ಅವರು ಪ್ರಮುಖ ಕಾರಣಕರ್ತರಾಗಿದ್ದಾರೆ. ಜೊತೆಗೆ




ಬಾಗಲಕೋಟೆ ಹಾಗೂ ಶಿಗ್ಗಾವಿ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಶ್ರಮವಹಿಸಿದ್ದಾರೆ. ನಿರಂತರವಾಗಿ ಶೋಷಿತ ಸಮುದಾಯಗಳ ಪರವಾಗಿ ಕಾರ್ಯ ನಿರ್ವಹಿಸುತ್ತಿರುವ ಸತೀಶ್ ಜಾರಕಿಹೊಳಿ ಅವರಿಗೆ ಕೆ.ಪಿ.ಸಿ.ಸಿ. ಅಧ್ಯಕ್ಷ ಸ್ಥಾನ ಹಾಗೂ ಉಪ ಮುಖ್ಯಮಂತ್ರಿ ಸ್ಥಾನ ನೀಡಿದರೆ ನಮ್ಮ ಸಮುದಾಯ ಇನ್ನೂ ಹೆಚ್ಚಿನ ರೀತಿಯಲ್ಲಿ ಸತೀಶ್ ಜಾರಕಿಹೊಳಿ ಅವರನ್ನು ಬೆಂಬಲಿಸಲು ಅನುಕೂಲವಾಗುತ್ತದೆ. ಹಾಗೂ ಇದು ಪಕ್ಷ ಸಂಘಟನೆಗೂ ಸಹಕಾರಿಯಾಗುತ್ತದೆ. ಆದ್ದರಿಂದ ಶೋಷಿತ ಸಮುದಾಯದ ಪರವಾಗಿರುವಂತ ಆಹಿಂದ ನಾಯಕ ಸತೀಶ್ ಜಾರಕಿಹೊಳಿ ಅವರಿಗೆ ಪಕ್ಷದಲ್ಲಿ ಉತ್ತಮ ಹುದ್ದೆ ನೀಡುವಂತೆ ಮನವಿ ಮಾಡಿದ್ದಾರೆ.

ಹಾಗೆಯೇ ನಮ್ಮ ಸಮುದಾಯ ಮತ್ತೊಬ್ಬ ಪ್ರಭಾವಿ ನಾಯಕರಾದ ಮಾಜಿ ಸಚಿವ, ಮಧುಗಿರಿ ಶಾಸಕರಾದ ಕೆ.ಎನ್.ರಾಜಣ್ಣ ಅವರನ್ನೂ ಮತ್ತೆ ಸಂಪುಟಕ್ಕೆ ಸೇರ್ಪಡೆ ಮಾಡಿಕೊಳ್ಳಬೇಕು. ಇದರಿಂದ ಮುಂದಿನ ದಿನಗಳಲ್ಲಿ ಸ್ಥಳೀಯ ಸಂಸ್ಥೆಗಳಲ್ಲಿ ಕಾಂಗ್ರೆಸ್ ಪಕ್ಷ ಮತ್ತಷ್ಟು ಪ್ರಬಲವಾಗಲು ಅನುಕೂಲವಾಗಲಿದೆ.

ಕಾಂಗ್ರೆಸ್ ಪಕ್ಷ ಎಲ್ಲ ಸಮುದಾಯದಗಳ ಪರವಾಗಿದೆ ಎಂಬುದನ್ನು ಸಾಬೀತು ಮಾಡಲು, ಕೆ.ಎನ್.ರಾಜಣ್ಣ, ಸತೀಶ್ ಜಾರಕಿಹೊಳಿ ಸೇರಿದಂತೆ ಅವಕಾಶ ಇರುವ ಕಡೆ ನಮ್ಮ ಸಮುದಾಯದ ಶಾಸಕರನ್ನು ಮಂತ್ರಿ ಮಾಡಬೇಕು ಎಂದು ಮತ್ತೊಮ್ಮೆ ಮನವಿ ಮಾಡಿದ್ದಾರೆ.

# ನೂತನ ಜಿಲ್ಲಾಧ್ಯಕ್ಷರ ಅಧಿಕಾರ ಸ್ವೀಕಾರ ಸಮಾರಂಭ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಹುಟ್ಟಿದ್ದೇ ಎಲೆಮರೆ ಸಾಧಕರನ್ನು ಗುರುತಿಸಿ ಮುಖ್ಯ ವಾಹಿನಿಗೆ ತರುವ ನಿಟ್ಟಿನಲ್ಲಿ ಎಂದು ಹಾಸನ ಘಟಕದ ಜಿಲ್ಲಾಧ್ಯಕ್ಷ ವಾಸು ಸಮುದ್ರವಳ್ಳಿ ಅಭಿಪ್ರಾಯಪಟ್ಟರು.

ಅವರು ನಗರದಲ್ಲಿ ಹಮ್ಮಿಕೊಂಡಿದ್ದ ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಮಾತನಾಡಿ ಕೇಂದ್ರ ಸಮಿತಿಯ ಟ್ರಸ್ಟಿಗಳ ಸಹಕಾರದಲ್ಲಿ ಮೊದಲ ಅವಧಿಯಲ್ಲಿ ಸಾಧ್ಯವಾದಷ್ಟು ಕೆಲಸ ಮಾಡಿದ್ದೆ, ಪ್ರಸಕ್ತ ಎರಡನೇ ಅವಧಿಗೆ ಜಿಲ್ಲಾಧ್ಯಕ್ಷರನ್ನಾಗಿ ಆಯ್ಕೆ ಮಾಡಿರುವುದು ನನ್ನ ಜವಬ್ದಾರಿಯನ್ನು ಹೆಚ್ಚಿಸಿದೆ. ಕೇಂದ್ರ ಸಮಿತಿಯ ಮಾರ್ಗದರ್ಶನದಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕು ಅಧ್ಯಕ್ಷರುಗಳ ಸಹಕಾರದಲ್ಲಿ ಸೃಜನಾತ್ಮಕ ಮತ್ತು ಗುಣಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮುಖೇನ ವೇದಿಕೆಯ ಬೈಲಾ ನಿಯಮದಡಿ ಕಾರ್ಯೋನ್ಮುಖನಾಗುತ್ತೇನೆ ಎಂದರು.

ಈ ಸಂದರ್ಭದಲ್ಲಿ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್, ರಾಜ್ಯ ಜಂಟಿ ಕಾರ್ಯದರ್ಶಿ ನಾಗರಾಜ ದೊಡ್ಡಮನಿ, ಹಾಸನ ತಾಲ್ಲೂಕು ಅಧ್ಯಕ್ಷೆ ಕೆ.ಸಿ. ಗೀತಾ, ಹಾಸನ ಕಾರ್ಯದರ್ಶಿ ಸಿ.ಎನ್. ನೀಲಾವತಿ, ಆಲೂರು ಕಾರ್ಯದರ್ಶಿ ಧರ್ಮ ಕೆರಲೂರು, ಆಲೂರು ಮಹಿಳಾ ಕಾರ್ಯದರ್ಶಿ ಎಂ. ಚಂದ್ರಕಲಾ ಆಲೂರು, ಕವಯಿತ್ರಿಯರಾದ ಗಿರಿಜಾ ನಿರ್ವಾಣಿ, ಎಚ್.ಬಿ. ಚೂಡಾಮಣಿ, ರಾಣಿ ಸಿ. ಚರಾಶ್ರೀ, ಪದ್ಮಾವತಿ ವೆಂಕಟೇಶ್, ರುಮಾನ ಜಬೀರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ದೇಶ ಪ್ರೇಮದ ಮತ್ತೊಂದು ಮಗುಲಿನ "ಸ್ವಾತಂತ್ರ್ಯದ ಓಟ"

ಬೋಳುವಾರು ಮಹಮ್ಮದ್ ಕುಞ ಅವರ ಕಾದಂಬರಿ "ಸ್ವಾತಂತ್ರ್ಯದ ಓಟ" ಭಾನುವಾರ ಸಂಜೆ ಹಾಸನಾಂಬ ಕಲಾಕ್ಷೇತ್ರದಲ್ಲಿ ಯಶಸ್ವಿ ಪ್ರದರ್ಶನ ಕಂಡಿತು.

ದೇಶ ವಿಭಜನೆಯ ಹಾಗು ಆ ನಂತರದ ಸಂಗತಿಗಳನ್ನು ತಿಳಿಸಿಕೊಡುವ ಈ ನಾಟಕಗಳು ವಿದ್ಯಾರ್ಥಿಗಳಿಗೆ ತಲುಪಬೇಕು ಎಂಬ ಅಭಿಪ್ರಾಯ ವ್ಯಕ್ತವಾಯಿತು.

ದೇಶ ವಿಭಜನೆಯ ನೋವು ಹಾಗು ಆ ನಂತರದ ಮಾನವೀಯ ಸಂಘರ್ಷಗಳನ್ನು ಬಹಳ ಸೂಕ್ಷ್ಣವಾಗಿ, ಜನಪರವಾಗಿ ನಾಟಕ ನಿರೂಪಿಸಿತು.

ಲಾಹೋರಿನ ನಿವಾಸಿ ಚಾಂದ್ ಅಲಿ ಒಂದು ಸಿಖ್ ಕುಟುಂಬಕ್ಕೆ ಸಂಬಂಧಪಟ್ಟ ಕುಲುಮೆಯಲ್ಲಿ ಕೆಲಸ ಮಾಡಿಕೊಂಡಿರುತ್ತಾನೆ. ಆ ಸಿಖ್ ಸಮುದಾಯದ ಕುಟುಂಬಕ್ಕು ಮುಸಲ್ಮಾನನಾದ ಚಾಂದ್ ಅಲಿಗೂ ಅನ್ಯೋನ್ಯ ಸಂಬಂಧವಿರುತ್ತದೆ.

ಹಠಾತ್ತನೇ ದೇಶ ಇಬ್ಭಾಗವಾಗಿ ಹಿಂದುಗಳು, ಸಿಖರು ಪಾಕಿಸ್ತಾನದ ಬಿಟ್ಟು ಹೊರಡಬೇಕಾಗುತ್ತದೆ. ಆ ಸಿಖ್ ಸಮುದಾಯದ ಇಬ್ಬರು ಹೆಣ್ಣುಮಕ್ಕಳನ್ನು ಹಿಂದೂ ನಿರಾಶ್ರಿತರ ಶಿಬಿರಕ್ಕೆ ಸುರಕ್ಷಿತವಾಗಿ ತಲುಪಿಸಲು ಹೋಗಿ ಭಾರತವನ್ನು ಸೇರಿಕೊಳ್ಳುತ್ತಾನೆ.

ಮತ್ತೆಂದೂ ತನ್ನೂರು ಲಾಹೋರಿಗೆ ಹೋಗಲು ಸಾಧ್ಯವಾಗದೇ ದಕ್ಷಿಣ ಭಾರತದ ಮುತ್ತುಪ್ಪಾಡಿ ಎಂಬ ಊರಿನಲ್ಲಿ ನೆಲೆ ನಿಲ್ಲುತ್ತಾನೆ.

ಇದರ ಸುತ್ತ ಮಾನವೀಯ ಅಂತಃಕರಣ ಮಿಡಿಯುವಂತಹಾ ಕಥಾ ಹಂದರ ಪ್ರೇಕ್ಷಕರ ಗಮನ ಸೆಳೆಯಿತು.





ಮೂರವರೆ ಗಂಟೆಗಳ ಸುದೀರ್ಘ ನಾಟಕದಲ್ಲಿ ಮಧ್ಯೆ ಹತ್ತು ನಿಮಿಷಗಳ ವಿರಾಮವಿತ್ತು. ಆಗ ಹಿರಿಯ ರಂಗಕರ್ಮಿ ಪ್ರಸಾದ್ ರಕ್ಷಿದಿ ನಾಟಕದ ಕುರಿತಾಗಿ ಮಾತನಾಡಿ ಇದೊಂದು ಆದುನಿಕ ಮಹಾಭಾರತ ಎಂದು ಲಕ್ಷೀಶ ತೊಳ್ಪಾಡಿಯವರ ಮಾತನ್ನು ನೆನಪಿಸಿಕೊಂಡರು.

ಮಹಾನಗರಪಾಲಿಕೆಯ ಇಂಜಿನಿಯರ್ ಕವಿತಾ ಕೆ ಆರ್ ಮಾತನಾಡಿ ಸೋಷಿಯಲ್ ಮೀಡಿಯಾ ಎಲ್ಲಾ ಬಂದ್ ಮಾಡಿದರೆ ಇಂತಹಾ ಒಳ್ಳೆಯ ಅಭಿರುಚಿಯನ್ನು ಬೆಳೆಸಲು ಸಾಧ್ಯವಾಗುತ್ತದೆ ಎಂದರು. ಸರ್ಕಾರಿ ನೌಕರರ ಸಂಘದ ಶ್ರೀನಿವಾಸ್ ಅವರು ಮಾತನಾಡಿ ಇಂತಹಾ ಉತ್ತಮ ನಾಟಕವನ್ನು ಆಯೋಜನೆ ಮಾಡಿದ್ದು ಪ್ರಶಂಸನೀಯವೆಂದರು.ಹಿರಿಯ ಪತ್ರಕರ್ತರಾದ, ಕ ಸಾ ಪದ ಮಾಜಿ ಗೌರವ ಅಧ್ಯಕ್ಷರಾದ ರವಿನಾಕಲಗೂಡು ಮಾತನಾಡಿ ದೇಶದ ಇತಿಹಾಸವನ್ನು ತಿಳಿಯಲು ಇಂತಹಾ ನಾಟಕ ಪ್ರಮುಖ ಪಾತ್ರ ವಹಿಸುತ್ತದೆ ಎಂದರು. ವಿಜಯ ಶಾಲೆಯ ತಾರಾ ಸುಬ್ಬ ಸ್ವಾಮಿ ಅವರು ಮಾತಾನಾಡಿ ಅಭಿನಂದನೆ ತಿಳಿಸಿದರು.

ನಾಟಕ ಆಯೋಜನೆ ಮಾಡಿದ್ದಕ್ಕಾಗಿ ಚಲಂ ಹಾಡ್ಲಹಳ್ಳಿ, ಶಾಡ್ರಾಕ್, ಪೂಜಾ ರಘುನಂದನ್ ಹಾಗು ಚೆನ್ನೇನಹಳ್ಳಿ ಸ್ವಾಮಿಯವರಿಗೆ ಧನ್ಯವಾದಗಳನ್ನು ತಿಳಿಸಿದರು.

ನಿರ್ದೇಶಕರಾದ ನಟರಾಜ್ ಹೊನ್ನವಳ್ಳಿಯವರು ಕಾದಂಬರಿಗೆ ಎಲ್ಲಿಯು ಲೋಪ ಬರದಂತೆ ಪರಿಣಾಮಕಾರಿಯಾಗಿ ರಂಗಕ್ಕೆ ಅಳವಡಿಸಿದ್ದಾರೆ.

ಭಾನುವಾರ ಸಂಜೆ 5-30 ಕ್ಕೆ ಸರಿಯಾಗಿ ಆರಂಭವಾಗಿದ್ದು ನಾಟಕವನ್ನು ನೋಡಲು ಬಂದ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು.

## ಸ್ವಾತಂತ್ರ್ಯದ ಓಟ

ಈ ನಾಟಕವನ್ನು ನಾನು ಕಲಾಭವನದಲ್ಲಿ ವೀಕ್ಷಣೆ ಮಾಡಿದೆ. ತುಂಬಾ ಅದ್ಭುತವಾಗಿ ಮೂಡಿ ಬಂತು ಎಲ್ಲಾ ಕಲಾವಿದರು ಒಬ್ಬರಿಗಿಂತ ಒಬ್ಬರು ಅಭಿನಯ ಮಾಡಿದ್ದರು ಸುಮಾರು ಮೂರು ಗಂಟೆಗಳ ಕಾಲ ನಾವು ಇದನ್ನು ಮೈಮರೆತು ನೋಡಿದೆ ನನಗೆ ಈ ನಾಟಕವನ್ನು ನೋಡುವಾಗ ಒಂದು ಕ್ಷಣ ಕಣ್ಣು ಮುಂದೆ ಬಂದಿದ್ದು ಎಲ್ಲಾ ಸಾಮಾಜಿಕ ಜಾಲತಾಣಗಳನ್ನು ನಿರ್ಬಂಧ ಮಾಡಿ ಇಂತಹ ನಾಟಕಗಳನ್ನು ವೀಕ್ಷಣೆ ಮಾಡುವುದು ಕಡ್ಡಾಯ ಮಾಡಿದರೆ ಜನಗಳಿಗೂ ಹಾಗೂ ವಿದ್ಯಾರ್ಥಿಗಳಿಗೆ ಪ್ರಮುಖವಾಗಿ ವಿದ್ಯಾರ್ಥಿಗಳಿಗೆ ಒಳ್ಳೆಯ ಜ್ಞಾನ ಮೂಡುತ್ತದೆ ನಮ್ಮ ಸಮಾಜದಲ್ಲಿ ಏನಾಗುತ್ತೆ ಸ್ವಾತಂತ್ರ ಸಿಕ್ಕ ನಂತರ ಪಾಕಿಸ್ತಾನ ಮತ್ತು ಭಾರತ ವಿಭಜನೆಯಾದ ಮೇಲೆ ಇಂತಹ ಕಷ್ಟಗಳನ್ನು ಅಲ್ಲಿನ ಜನರು ಅನುಭವಿಸಿದ್ದಾರೆ ಎಂದು ತಿಳಿಯುತ್ತದೆ ಈ ನಾಟಕದಲ್ಲಿ ಚಾಂದ್ ಅಲಿಯ ಪಾತ್ರ ನೋಡಿದ



ಮೇಲೆ ನನಗೆ ಅನಿಸಿದ್ದು ಪಾಕಿಸ್ತಾನ ಮತ್ತು ಭಾರತ ಯಾಕೆ ವಿಭಜಿತವಾದವು.

ಒಂದು ವೇಳೆ ವಿಭಜಿತ ಆಗದಿದ್ದರೆ ಎಲ್ಲರೂ ಅನ್ಯೋನ್ಯವಾಗಿ ಇರಬಹುದಿತ್ತು ರಕ್ತದೋಕುಳಿ ಹರಿಯುತ್ತಿರಲಿಲ್ಲ ನೆಮ್ಮದಿ ಹಾಳಾಗುತ್ತಿರಲಿಲ್ಲ ಒಂದು ಕುಟುಂಬದಂತೆ ಇರಬಹುದಿತ್ತು . ಕೆಲವರು ತಮ್ಮ ಸ್ವಾರ್ಥಕೋಸ್ಕರ ಯುದ್ಧಗಳನ್ನು ಮಾಡಿಸಿ ಮುಗ್ಧ ಜೀವಗಳ ಜೊತೆ ಆಟವಾಡುತ್ತಾರೆ.

**- ಕವಿತಾ ಕೆ ಆರ್, ಇಂಜಿನಿಯರ್**



Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248